**ಬಂಟ್ವಾಳ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ**

**ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

ಸಿಸಿ ನಂ. 1369/2022

ಫ್ರಾಸಾ : 03

ಚಾಸಾ : 04

| | | |
|---|---|---|
| ಹೆಸರು | : | ಪ್ರತಾಪ್ |
| ತಂದೆಯ ಹೆಸರು | : | ಹೆಚ್ ಸಿ ಚಂದ್ರಶೇಖರ |
| ಫ್ರಾಯ | : | 21 ವರ್ಷ |
| ಉದ್ಯೋಗ | : | ಖಾಸಗಿ ಉದ್ಯೋಗಿ |
| ವಾಸಸ್ಥಳ | : | ಜೆ.ಪಿ. ನಗರ, ಮೈಸೂರು |

ದಿಃ **21.01.2026** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1. ಚಾಸಾ 1 ರಿಂದ 3 ಮತ್ತು 5 ನನ್ನ ಸ್ನೇಹಿತರು. ಆರೋಪಿಯನ್ನು ನಾನು ನೋಡಿರುವುದಿಲ್ಲ. ಇದೇ ಮೊದಲ ಬಾರಿಗೆ ನ್ಯಾಯಾಲಯದ ಮುಂದೆ ನೋಡುತ್ತಿದ್ದೇನೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ. ನಾನು ಯಾವುದೆ ಅಪಘಾತವನ್ನು ಕಣ್ಣಾರೆ ನೋಡಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ ಹಾಗೂ ಯಾವುದೇ ಹೇಳಿಕೆ ಪಡೆದಿರುವುದಿಲ್ಲ. ಸಾಕ್ಷಿಗೆ ನಿ.ಪಿ. 7 ಬಾವಚಿತ್ರಗಳಲ್ಲಿರುವ ಕೆಎ-51-ಎಂಡಿ-1684 ನೇ ಕಾರಿನ 3 ಬಾವಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಗೆ ಕೆಎ-05-ಎಂಜಿ-0994 ನೇ 3 ಬಾವಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಎಪಿಪಿಯವರಿಂದಃ –**

2. ದಿನಾಂಕ 10.04.2022 ರಂದು ಮುಂಜಾನೆ 1.30 ರ ಸಮಯದಲ್ಲಿ ಮಂಗಳೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಆರೋಪಿ ತನ್ನ ಬಾಬ್ತು ಕೆಎ–05–ಎಂಜೆ–0994 ನೇ ಕಾರನ್ನು ಬೆಂಗಳೂರು ಕಡೆಯಿಂದ ಮಂಗಳೂರು ಕಡೆಗೆ ದುಡುಕುತನ ಮತ್ತು ನಿರ್ಲಕ್ಷ್ಯತನದಿಂದ ಚಲಾಯಿಸಿಕೊಂಡು ಬಂದು ಬಂಟ್ವಾಳ ತಾಲೂಕಿನ ಪೆರಾಜೆ ಗ್ರಾಮದ ಬುಡೋಳಿ ಎಂಬಲ್ಲಿಗೆ ತಲುಪಿದಾಗ ಎದುರಿನಿಂದ ಅಂದರೆ ಮಂಗಳೂರು ಕಡೆಯಿಂದ ಮೈಸೂರು ಕಡೆಗೆ ಚಾಸಾ1ರವರು ಚಲಾಯಿಸಿಕೊಂಡು ಹೋಗುತ್ತಿದ್ದ ಕೆಎ–51–ಎಂಡಿ–1684 ನೇ ಕಾರಿಗೆ ಡಿಕ್ಕಿಪಡಿಸಿರುತ್ತಾನೆ ಎಂದರೆ ಸರಿಯಲ್ಲ. ಅದರ ಪರಿಣಾಮ ಚಾಸಾ 1 ರವರ ಕಾರಿನಲ್ಲಿದ್ದ ಚಾಸಾ 2 ರವರ ಎಡ ಕಾಲಿನ ಮಂಡಿಗೆ ಮತ್ತು ಬೆನ್ನಿಗೆ ಗುದ್ದಿದ ಗಾಯಗಳಾಗಿದ್ದು, ಚಾಸಾ 3 ರವರ ತಲೆಗೆ ರಕ್ತ ಗಾಯವಾಗಿರುತ್ತದೆ ಎಂದರೆ ಸರಿಯಲ್ಲ. ಅಲ್ಲದೇ ಕೆಎ–05–ಎಂಜೆ–0994 ನೇ ಕಾರಿನ ಎಡಬದಿ ಕುಳಿತಿದ್ದ ಲಕ್ಷ್ಮಣ ಆಚಾರ್ಯ ರವರ ತಲೆಯ ಭಾಗಕ್ಕೆ ಗಂಭೀರ ಸ್ವರೂಪದ ಗಾಯಗಳಾಗಿ ಮೃತಪಡಲು ಆರೋಪಿ ಕಾರಣನಾಗಿರುತ್ತಾನೆ ಎಂದರೆ ಸರಿಯಲ್ಲ. ಸದರಿ ಅಪಘಾತದಲ್ಲಿ ಚಾಸಾ 1 ರವರ ಎರಡೂ ಕಾಲಿಗೆ ಸ್ವಲ್ಪ ರಕ್ತಗಾಯ ಹಾಗೂ ನನಗೆ ಮತ್ತು ಚಾಸಾ 5 ರವರ ಕಾಲಿಗೆ ಗುದ್ದಿದ ಸಾಮಾನ್ಯ ಗಾಯ ಮತ್ತು ಆರೋಪಿಗೆ ತಲೆಗೆ ಮತ್ತು ಶರೀರದ ಇತರ ಭಾಗಗಳಿಗೆ ಗಾಯವಾಗಿರುತ್ತದೆ ಎಂದರೆ ಸರಿಯಲ್ಲ.

3. ಅದೇ ದಿನ ನಾನು ಪೊಲೀಸರ ಮುಂದೆ ನಾನು ಈ ಮೇಲಿನ ವಿಳಾಸದಲ್ಲಿ ವಾಸವಾಗಿದ್ದು .................................................................................................................................................................. **ಅಪಘಾತಪಡಿಸಿದ** ಕೆಎ-05-ಎಂಜಿ-0994 ನೇ ಸುಜುಕಿ ಎ ಸ್ಟಾರ್ ಕಾರನ್ನು ಮತ್ತು ಅದರ ಚಾಲಕ ಪ್ರಜ್ವಲ್ ರವರನ್ನು ರಸ್ತೆಯ ಬದಿಯಲ್ಲಿ ವಿದ್ಯುತ್ ದೀಪದ ಬೆಳಕಿನ ಸಹಾಯದಿಂದ ಹಾಗೂ ರಸ್ತೆಯಲ್ಲಿ ಸಂಚರಿಸುತ್ತಿದ್ದ ವಾಹನಗಳ ಹೆಡ್ ಲೈಟಿನ ಸಹಾಯದಿಂದ ನೋಡಿದ್ದು ಮುಂದಕ್ಕೆ ನೋಡಿದರೆ ಗುರುತಿಸಬಲ್ಲೆನು ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸದರಿ ಹೇಳಿಕೆಯ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿಯು ಅವುಗಳನ್ನು ಅಲ್ಲಗಳೆದಿರುತ್ತಾರೆ. ಸಾಕ್ಷಿಯು ಅಲ್ಲಗಳೆದ ಭಾಗವನ್ನು ನಿ.ಪಿ. 10 ಎಂದು ಗುರುತಿಸಲಾಯಿತು. ಆರೋಪಿಯಾಡನೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರಃ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ